## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀಮತಿ ಮಂಜುಳ ಸದಸ್ಯರು ಹಾರನಹಳ್ಳಿ ಗ್ರಾಮ ಪಂಚಾಯಿತಿ, ಅರಸೀಕೆರೆ ತಾಲ್ಲೂಕು ಹಾಸನ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) ರನ್ವಯ ಕ್ರಮ ಕೈಗೊಳ್ಳುವ ಬಗ್ಗೆ.

ಓದಲಾಗಿದೆ:

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಹಾಸನ ಇವರ ಪತ್ರ ಸಂಖ್ಯೆ: ಜಿ.ಪಂ/ಪಶಾ/55/2017-18, ದಿನಾಂಕ:12.04.2018.
2. ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ465:ಗ್ರಾಪಂಅ:2018, ದಿನಾಂಕ:21.05.2018ರ ಕಾರಣ ಕೇಳುವ ನೋಟಿಸ್.
3. ಶ್ರೀಮತಿ ಮಂಜುಳ, ಸದಸ್ಯರು, ಹಾರನಹಳ್ಳಿ ಗ್ರಾಮ ಪಂಚಾಯಿತಿ, ಇವರು ಕಾರಣ ಕೇಳುವ ನೋಟಿಸ್‌ಗೆ ನೀಡಿರುವ ಲಿಖಿತ ಹೇಳಿಕೆ ದಿನಾಂಕ:13.06.2018.
4. ಇದೇ ಸಮಸಂಖ್ಯೆಯ ವಿಚಾರಣಾ ನೋಟೀಸಿನ ದಿನಾಂಕ: 11.01.2019, 31.01.2019 ವಿಚಾರಣೆ ನಡೆದ ದಿನಾಂಕ: ಮತ್ತು 16.01.2019, 05.02.2019.

<u>ಪ್ರಸ್ತಾವನೆ:</u>

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರಲ್ಲಿ ಶ್ರೀಮತಿ ಮಂಜುಳ ಸದಸ್ಯರು ಹಾರನಹಳ್ಳಿ ಗ್ರಾಮ ಪಂಚಾಯಿತಿ, ಅರಸೀಕೆರೆ ತಾಲ್ಲೂಕು ಹಾಸನ ಜಿಲ್ಲೆ, ಇವರು ದಿನಾಂಕ: 08-02-2017, ದಿ: 27-03-2017, ದಿ: 10-04-2017, ದಿ: 24-05-2017ರಂದು ನಡೆದ ಗ್ರಾಮ ಪಂಚಾಯತಿ ಸಾಮಾನ್ಯ ಸಭೆಗೆ ನಿರಂತರವಾಗಿ 04 ಸಾಮಾನ್ಯ ಸಭೆಗಳಿಗೆ ಗೈರು ಹಾಜರಾಗಿರುತ್ತಾರೆಂದು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ)(iii) ಪ್ರಕಾರ ಸದಸ್ಯತ್ವದಿಂದ ತೆಗೆದುಹಾಕಲು ಅಗತ್ಯ ದಾಖಲೆಗಳೊಂದಿಗೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಹಾಸನ ರವರು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (2) ರಲ್ಲಿ ಸದರಿಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ 1993 ರ ಪ್ರಕರಣ 43-ಎ ರಡಿ ಕ್ರಮವಹಿಸುವ ಪೂರ್ವದಲ್ಲಿ ನಿಯಮಾನುಸಾರ ಕಾರಣ ಕೇಳುವ ನೋಟೀಸನ್ನು ದಿನಾಂಕ: 21.05.2018 ರಂದು ಜಾರಿ ಮಾಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (3) ರಲ್ಲಿ ಸದರಿಯವರು ಕಾರಣ ಕೇಳುವ ನೋಟೀಸಿಗೆ ಈ ಕೆಳಕಂಡಂತೆ ಉತ್ತರ ಸಲ್ಲಿಸಿರುತ್ತಾರೆ.

- ನಾನು ಪಂಚಾಯತಿಯಲ್ಲಿ ನಡೆದ ಸಾಮಾನ್ಯ ಸಭೆಗಳಿಗೆ ಗೈರುಹಾಜರಾಗಲು ಅನುಮತಿ ಕೋರಿ ಅರ್ಜಿಯನ್ನು ಸಲ್ಲಿಸಿದ್ದು, ಮೌಖಿಕವಾಗಿ ಪಂಚಾಯತಿ ಅಭಿವೃದ್ಧಿ ಅಧಿಕಾರಿ ರವರಿಂದ ಅನುಮತಿಯನ್ನು ಪಡೆದುಕೊಂಡಿರುತ್ತೇನೆ. ಆದಾಗ್ಯೂ ಅಧ್ಯಕ್ಷರಾದ ಶ್ರೀ ಹೆಚ್ ಎಸ್. ನಂದೀಶ್, ಸದಸ್ಯರಾದ ಜಯಪ್ರಕಾಶ್ ಹಾಗೂ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ನನ್ನ ವಿರುದ್ಧ ರಾಜಕೀಯ ಕಾರಣಗಳಿಂದ ಮೇಲಾಧಿಕಾರಿಗಳಿಗೆ ಅಲ್ಪ ಮಾಹಿತಿಯನ್ನು ನೀಡಿ ನನ್ನ ಸದಸ್ಯತ್ವ ಸ್ಥಾನವನ್ನು ವಜಾಗೊಳಿಸಲು ಪ್ರಯತ್ನಿಸಿರುತ್ತಾರೆ.
- ಗ್ರಾಮ ಪಂಚಾಯತಿಯ ಸಾಮಾನ್ಯ ಸಭೆಗಳಲ್ಲಿ ಭಾಗವಹಿಸಲು ನನಗೆ ಅನಾರೋಗ್ಯದ ಕಾರಣದಿಂದಾಗಿ ಗೈರುಹಾಜರಾಗಲು ವೈದ್ಯಕೀಯ ದಾಖಲಾತಿಗಳೊಂದಿಗೆ ಸಾಮಾನ್ಯ ಸಭೆಗಳು ನಡೆಯುವ ಮುಂಚಿತವಾಗಿ ಸಭೆಗಳಿಗೆ ಗೈರು ಹಾಜರಾಗಲು ಅನುಮತಿ ಕೋರಿ ಅರ್ಜಿ ಸಲ್ಲಿಸಿ, ಅವರಿಂದ ಮೌಖಿಕವಾಗಿ ಆದೇಶವನ್ನು ಪಡೆದು ಗೈರು ಹಾಜರಾಗಿರುತ್ತೇನೆ ಹೊರತು ಯಾವುದೇ ರೀತಿಯಲ್ಲಿ ದುರುದ್ದೇಶ ಪೂರ್ವಕವಾಗಿಯೇ ಆಗಲಿ ನಾನು ಕರ್ತವ್ಯದಲ್ಲಿ ಲೋಪವೆಸಗಿರುವುದಿಲ್ಲ. ಹಾಗಾಗಿ ತಾವು ನನ್ನ ವೈದ್ಯಕೀಯ ದಾಖಲಾತಿಗಳು ಹಾಗೂ ಗ್ರಾಮ ಪಂಚಾಯತಿಯ ಆಡಳಿತಕ್ಕೆ ನೀಡಿದ್ದ ಮನವಿ ಅರ್ಜಿಗಳನ್ನು ಪರಿಶೀಲಿಸಿ ನನಗೆ ನ್ಯಾಯ ಒದಗಿಸಿ ಗ್ರಾಮ ಪಂಚಾಯತಿಯ ಸದಸ್ಯಳಾಗಿ ಮುಂದುವರೆಯಲು ಅನುವುಮಾಡಿಕೊಡಬೇಕೆಂದು ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4) ರಲ್ಲಿ ಮಾನ್ಯ ಪ್ರಧಾನ ಕಾರ್ಯದರ್ಶಿಯವರ ನ್ಯಾಯಾಲಯದಲ್ಲಿ ದಿನಾಂಕ:16.01.2019 ರಂದು ನಡೆದ ವಿಚಾರಣೆಯಲ್ಲಿ ಶ್ರೀಮತಿ ಮಂಜುಳ, ಸದಸ್ಯರು, ಹಾರನಹಳ್ಳಿ ಗ್ರಾಮ

ಪಂಚಾಯತಿ, ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತಿ, ಹಾಸನ ಮತ್ತು ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಅರಸೀಕೆರೆ ತಾಲ್ಲೂಕು ರವರುಗಳು ಹಾಜರಿದ್ದು ತಮ್ಮ ಹೇಳಿಗೆಯನ್ನು ತಿಳಿಸಿರುತ್ತಾರೆ. ದಿನಾಂಕ: 05.02.2019ರಂದು ನಡೆದ ವಿಚಾರಣೆಯಲ್ಲಿ ಆಪಾದಿತ ಸದಸ್ಯರು ಶ್ರೀಮತಿ ಮಂಜುಳ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹಾರನಹಳ್ಳಿ ಗ್ರಾಮ ಪಂಚಾಯತಿ ರವರು ತಾವು ಕೊಟ್ಟಿರುವ ಲಿಖಿತ ಹೇಳಿಕೆ ಬಿಟ್ಟು ಮತ್ತೆ ಯಾವುದೇ ಹೇಳಿಕೆ ಇರುವುದಿಲ್ಲವೆಂದು ತಿಳಿಸಿರುತ್ತಾರೆ. ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತಿ, ಹಾಸನ ಮತ್ತು ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಅರಸೀಕೆರೆ ತಾಲ್ಲೂಕು ರವರುಗಳು ಹಾಜರಿರುತ್ತಾರೆ. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಅರಸೀಕೆರೆ ತಾಲ್ಲೂಕು ಇವರು ಗೈರು ಹಾಜರಿಯ ಬಗ್ಗೆ ಸಾಮಾನ್ಯ ಸಭೆಗೆ ಮುಂಚಿತವಾಗಿ ಅನುಮತಿ ಪತ್ರ ಸಲ್ಲಿಸಿರುವುದಿಲ್ಲ. ಈ ಪ್ರಕರಣವನ್ನು ವಿಚಾರಣೆಗೆ ತೆಗೆದುಕೊಂಡ ನಂತರ ಕೊಟ್ಟಿರುತ್ತಾರೆಂದು ತಿಳಿಸಿರುತ್ತಾರೆ. ಪ್ರಕರಣವನ್ನು ಆದೇಶಕ್ಕಾಗಿ ಕಾಯ್ದಿರಿಸಲಾಯಿತು.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43–ಎ(1)(iii) ಸರ್ಕಾರವು, ಗ್ರಾಮ ಪಂಚಾಯತ್‌ನ ಶಿಫಾರಸ್ಸಿನಂತೆ ಅಥವಾ ಅನ್ಯಥಾ ಯಾವೊಬ್ಬ ಸದಸ್ಯನನ್ನು ಅವನ್ನು ಪಂಚಾಯತ್‌ನ ನಾಲ್ಕು ಒಂದಾದ ಮೇಲೊಂದಂತೆ ಆದ ಸಭೆಗಳಿಗೆ ಹಾಜರಾಗಲು ತಪ್ಪಿದ್ದರೆ ಅವನಿಗೆ ಅಹವಾಲನ್ನು ಹೇಳಿಕೊಳ್ಳಲು ಅವಕಾಶ ನೀಡಿದ ನಂತರ ಮತ್ತು ಅಗತ್ಯವೆಂದು ತಾನು ಭಾವಿಸಿದಂಥ ವಿಚಾರಣೆ ಮಾಡಿದ ನಂತರ ತೆಗೆದು ಹಾಕುವುದು ಸೂಕ್ತವೆಂದು ಭಾವಿಸಿದ್ದರೆ ಆ ಸದಸ್ಯನನ್ನು ಆತನ ಸದಸ್ಯತ್ವದಿಂದ ತೆಗೆದುಹಾಕಬಹುದು ಎಂದು ಉಲ್ಲೇಖಿಸಲಾಗಿದೆ.

ಸರ್ಕಾರವು ಲಭ್ಯವಿರುವ ಎಲ್ಲಾ ಸಾಕ್ಷ್ಯಾಧಾರಗಳು, ದಾಖಲಾತಿಗಳು, ಆಪಾದಿತರ ಲಿಖಿತ ಮತ್ತು ಮೌಖಿಕ ಹೇಳಿಕೆಗಳನ್ನು ಪರಿಶೀಲಿಸಿ, ಲಭ್ಯವಿರುವ ಎಲ್ಲಾ ದಾಖಲಾತಿಗಳನ್ನು ಪರಿಶೀಲಿಸಲಾಗಿ, ಆರೋಪವು ಸಾಬೀತಾಗಿರುವುದರಿಂದ ಶ್ರೀಮತಿ ಮಂಜುಳ ಸದಸ್ಯರು ಹಾರನಹಳ್ಳಿ ಗ್ರಾಮ ಪಂಚಾಯಿತಿ, ಅರಸೀಕೆರೆ ತಾಲ್ಲೂಕು ಹಾಸನ ಜಿಲ್ಲೆ ರವರು ದಿನಾಂಕ: 08–02–2017, ದಿ: 27–03–2017, ದಿ: 10–04–2017, ದಿ: 24–05–2017ರಂದು ನಡೆದ ಗ್ರಾಮ ಪಂಚಾಯತಿ ಸಾಮಾನ್ಯ ಸಭೆಗೆ ನಿರಂತರವಾಗಿ 04 ಸಾಮಾನ್ಯ ಸಭೆಗಳಿಗೆ ಗೈರು ಹಾಜರಾಗಿರು ಆರೋಪವು ಸಾಬೀತಾಗಿರುವುದನ್ನು ಗಮನಿಸಿ, ಶ್ರೀಮತಿ ಮಂಜುಳ ಸದಸ್ಯರು ಹಾರನಹಳ್ಳಿ ಗ್ರಾಮ ಪಂಚಾಯಿತಿ, ಅರಸೀಕೆರೆ ತಾಲ್ಲೂಕು ಹಾಸನ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43–ಎ (1) (iii) ರನ್ವಯ ಹಾರನಹಳ್ಳಿ ಗ್ರಾಮ ಪಂಚಾಯಿತಿ ಸದಸ್ಯ ಸ್ಥಾನದಿಂದ ತೆಗೆದು ಹಾಕಲು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 465 ಗ್ರಾಪಂಅ 2018,</u>**
**<u>ಬೆಂಗಳೂರು, ದಿನಾಂಕ: 14.03.2019.</u>**

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಲಭ್ಯವಿರುವ ಎಲ್ಲಾ ದಾಖಲಾತಿಗಳನ್ನು ಪರಿಶೀಲಿಸಲಾಗಿ, ಹಾಸನ ಜಿಲ್ಲೆ ಅರಸೀಕೆರೆ ತಾಲ್ಲೂಕು, ಹಾರನಹಳ್ಳಿ ಗ್ರಾಮ ಪಂಚಾಯಿತಿ, ಸದಸ್ಯರಾದ ಶ್ರೀಮತಿ ಮಂಜುಳ ರವರು ಅನುಮತಿ ಪಡೆಯದೆ ಪಂಚಾಯತ್‌ನ ನಾಲ್ಕು ಒಂದಾದ ಮೇಲೊಂದರಂತೆ ಆದ ಗ್ರಾಮ ಪಂಚಾಯತಿ ಸಭೆಗಳಿಗೆ ಗೈರು ಹಾಜರಾಗಿರುವುದು ಸಾಬೀತಾಗಿರುವುದು ಕಂಡುಬಂದಿರುವುದನ್ನು ಗಮನಿಸಿ, ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43–ಎ(1)(iii) ರನ್ವಯ ಶ್ರೀಮತಿ ಮಂಜುಳ ಸದಸ್ಯರು ಹಾರನಹಳ್ಳಿ ಗ್ರಾಮ ಪಂಚಾಯಿತಿ, ಅರಸೀಕೆರೆ ತಾಲ್ಲೂಕು ಹಾಸನ ಜಿಲ್ಲೆ, ಇವರನ್ನು ಹಾರನಹಳ್ಳಿ ಗ್ರಾಮ ಪಂಚಾಯಿತಿಯ ಸದಸ್ಯತ್ವ ಸ್ಥಾನದಿಂದ ತಕ್ಷಣದಿಂದ ಜಾರಿಗೆ ಬರುವಂತೆ ತೆಗೆದು ಹಾಕಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
14/3/19
(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಮತ್ತು ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

<u>ಗೆ:</u>

1) ಜಿಲ್ಲಾಧಿಕಾರಿ, ಹಾಸನ ಜಿಲ್ಲೆ.
2) ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಹಾಸನ ಜಿಲ್ಲಾ ಪಂಚಾಯಿತಿ, ಹಾಸನ ಜಿಲ್ಲೆ.
3) ಕಾರ್ಯನಿರ್ವಾಹಕಾಧಿಕಾರಿ, ಅರಸೀಕೆರೆ ತಾಲ್ಲೂಕು ಪಂಚಾಯಿತಿ, ಹಾಸನ ಜಿಲ್ಲೆ.
4) ಶ್ರೀಮತಿ ಮಂಜುಳ ಸದಸ್ಯರು ಹಾರನಹಳ್ಳಿ ಗ್ರಾಮ ಪಂಚಾಯಿತಿ, ಅರಸೀಕೆರೆ ತಾಲ್ಲೂಕು ಹಾಸನ ಜಿಲ್ಲೆ.

5) ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹಾರನಹಳ್ಳಿ ಗ್ರಾಮ ಪಂಚಾಯಿತಿ, ಅರಸೀಕೆರೆ ತಾಲ್ಲೂಕು, ಹಾಸನ ಜಿಲ್ಲೆ,
6) ಗಣಕ ಕೋಶ-ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
7) ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.

ಪ್ರತಿಯನ್ನು ಮಾಹಿತಿಗಾಗಿ:

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2) ಸರ್ಕಾರದ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3) ನಿರ್ದೇಶಕರು(ಪಂ.ರಾಜ್-1), ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.